**Akashvani : Bangalore**
**Regional Bulletin In Kannada**
**25.09.2025 / 2.30 pm**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪ ಅಂತಿಮ ದರ್ಶನ ಪಡೆದ ಗಣ್ಯರು; ಮೈಸೂರಿನಲ್ಲಿ ಸ್ಮಾರಕ - ಮುಖ್ಯಮಂತ್ರಿ ಘೋಷಣೆ

೨. ಬೆಂಗಳೂರು ರಸ್ತೆ ಗುಂಡಿ ಮುಚ್ಚಲು ೭೫೦ ಕೋಟಿ ರೂಪಾಯಿ ಅನುದಾನ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೩. ಗೃಹ ಜ್ಯೋತಿ ಯೋಜನೆ; ಫಲಾನುಭವಿಗಳನ್ನು ಅನರ್ಹಗೊಳಿಸಲು ಸರ್ಕಾರ ಹುನ್ನಾರ; ಬಿಜೆಪಿ ಆರೋಪ

೪. ನಾಡಹಬ್ಬ ದಸರಾ ಹಿನ್ನೆಲೆ; ಮೈಸೂರಿನಲ್ಲಿ ಪಾರಂಪರಿಕ ಸೈಕಲ್ ಸವಾರಿ; ಶ್ರೀರಂಗಪಟ್ಟಣ ದಸರಾ ಉದ್ಘಾಟನೆಗೆ ಕ್ಷಣಗಣನೆ

೫. ರಾಜ್ಯದೆಲ್ಲೆಡೆ ಸ್ವಚ್ಛತಾ ಹಿ ಸೇವಾ ಅಭಿಯಾನ; ಹಲವೆಡೆ ಪ್ರತಿಜ್ಞಾ ವಿಧಿ ಸ್ವೀಕಾರ

***************

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಇಂದು ಹಿರಿಯ ಸಾಹಿತಿ, ಕಾದಂಬರಿಕಾರ ಎಸ್.ಎಲ್. ಭೈರಪ್ಪ ಅವರ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಶಿವರಾಜ್ ತಂಗಡಗಿ, ಮಧು ಬಂಗಾರಪ್ಪ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಹಲವು ಗಣ್ಯರು ಅಂತಿಮ ದರ್ಶನ ಪಡೆದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಭೈರಪ್ಪ ಅವರು ಮೈಸೂರಿನಲ್ಲಿಯೇ ಹೆಚ್ಚಿನ ಸಮಯ ಕಳೆದಿರುವುದರಿಂದ ಮೈಸೂರಿನಲ್ಲಿ ಅವರ ಸ್ಮಾರಕ ನಿರ್ಮಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಘೋಷಿಸಿದ್ದಾರೆ.

**** ಧ್ವನಿ ****

ಮೈಸೂರಿನ ಕುವೆಂಪು ನಗರದಲ್ಲಿರುವ ಭೈರಪ್ಪ ನಿವಾಸಕ್ಕೆ ಬೆಂಗಳೂರಿನಿಂದ ಪಾರ್ಥಿವ ಶರೀರ ತೆರಳಿದ್ದು, ಮೈಸೂರಿನ ಕಲಾಮಂದಿರದಲ್ಲಿ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಮೈಸೂರು ಜಿಲ್ಲಾಡಳಿತ ಸರ್ಕಾರಿ ಗೌರವ ಸಲ್ಲಿಸಲು ಹಾಗೂ ಕಲಾಮಂದಿರದ ಆವರಣದಲ್ಲಿ ಸಕಲ ಸಿದ್ಧತೆ ಮಾಡಿಕೊಂಡಿದೆ. ನಾಳೆ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಸಲು ನಿರ್ಧರಿಸಲಾಗಿದೆ.

***************

ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪ ಬಿಟ್ಟು ಹೋಗಿರುವ ಆಸ್ತಿಯಾದ ಅಕ್ಷರ ಸಾಮ್ರಾಜ್ಯ ಪ್ರತಿಯೊಬ್ಬ ಕನ್ನಡಿಗನ ಆಸ್ತಿ ಎಂದು ಹಿರಿಯ ನಿರ್ದೇಶಕ ಟಿ.ಎಸ್. ನಾಗಾಭರಣ ಅಭಿಪ್ರಾಯಪಟ್ಟಿದ್ದಾರೆ.

******ಧ್ವನಿ ****

ಆಕಾಶವಾಣಿಯೊಂದಿಗೆ ಮಾತನಾಡಿದ ಹಿರಿಯ ನಟಿ ತಾರಾ ಭೈರಪ್ಪ ಅವರೊಂದಿಗಿನ ಒಡನಾಟವನ್ನು ಸ್ಮರಿಸಿದ್ದಾರೆ.

****ಧ್ವನಿ ****

***************

ಬೆಂಗಳೂರಿನ ರಸ್ತೆಗುಂಡಿಗಳನ್ನು ಮುಚ್ಚಲು ಸರ್ಕಾರ ಬದ್ಧವಾಗಿದ್ದು ಇದಕ್ಕಾಗಿಯೇ ಮುಖ್ಯಮಂತ್ರಿಗಳು ೭೫೦ ಕೋಟಿ ರೂಪಾಯಿ ಅನುದಾನ ನೀಡಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಗರದಲ್ಲಿ ರಸ್ತೆಗುಂಡಿಗಳಿರುವುದು ನಿಜ.

ಅವುಗಳನ್ನು ಮುಚ್ಚಲು ನಾವು ಕಾರ್ಯಪ್ರವೃತ್ತರಾಗಿದ್ದು, ಎಲ್ಲೆಲ್ಲಿ ರಸ್ತೆಗುಂಡಿಗಳಿವೆ ಎಂದು ಮಾಹಿತಿ ನೀಡಿ ಎಂದು ಸಾರ್ವಜನಿಕರು, ಪೊಲೀಸರಿಗೆ ಮನವಿ ಮಾಡಲಾಗಿದೆ. ನಾವು ಹೆಚ್ಚಿನ ತೆರಿಗೆ ಪಾವತಿ ಮಾಡುತ್ತಿದ್ದರೂ ಕೇಂದ್ರ ಸರ್ಕಾರ ಅನುದಾನ ನೀಡಿಲ್ಲ ಎಂದು ದೂರಿದ್ದಾರೆ.

***************

ಲಕ್ಷಾಂತರ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುವ ಮೂಲಕ ಸರ್ಕಾರ ಬಡವರ ಅನ್ನಭಾಗ್ಯಕ್ಕೆ ಕತ್ತರಿ ಹಾಕುತ್ತಿದೆ. ಇದೀಗ ೩೦ ದಿನಗಳ ಬದಲಾಗಿ, ೪೦ ದಿನಗಳಿಗೆ ವಿದ್ಯುತ್ ಮೀಟರ್ ರೀಡಿಂಗ್ ತೆಗೆದುಕೊಳ್ಳುವ ಮೂಲಕ ಫಲಾನುಭವಿಗಳ ವಿದ್ಯುತ್ ಬಳಕೆಯ ಸರಾಸರಿ ಮಿತಿ ಏರಿಸಿ, ಗೃಹಜ್ಯೋತಿ ಯೋಜನೆಯಿಂದ ಅನರ್ಹಗೊಳಿಸುವ ಹುನ್ನಾರ ನಡೆಸುತ್ತಿದೆ ಎಂದು ಪ್ರತಿ ಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ರಾಜ್ಯ ಸರ್ಕಾರ, ಗ್ಯಾರಂಟಿ ಯೋಜನೆಯನ್ನು ಹಿಂಬಾಗಿಲ ಮೂಲಕ ಸ್ಥಗಿತಗೊಳಿಸಲು ನಿರ್ಧರಿಸಿದೆ ಎಂದು ದೂರಿದ್ದಾರೆ. ಇನ್ನೊಂದೆಡೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಗಳೂರಿನ ರಸ್ತೆಯಲ್ಲಿ ಗುಂಡಿಗಳೇ ಕಾಣಿಸುತ್ತಿದ್ದು, ರಾಜ್ಯದ ಗೌರವ ಹಾಳಾಗುತ್ತಿದೆ ಎಂದು ಹೇಳಿದ್ದಾರೆ. ಸಮೀಕ್ಷೆ ಮೂಲಕ ಜಾತಿಗಳ ಬಗ್ಗೆ ಒಡಕು ಮೂಡಿಸುತ್ತಿದೆ ಎಂದು ಆರೋಪಿಸಿದ್ದಾರೆ.

***************

ಮೈಸೂರಿನಲ್ಲಿ ದಸರಾ ಸಂಭ್ರಮ ಕಳೆಗಟ್ಟಿದೆ. ನೂರಾರು ಯುವಕ-ಯುವತಿಯರು, ಇಂದು ಸೈಕಲ್ ಏರಿ ಮೈಸೂರಿನಲ್ಲಿರುವ ಪ್ರಮುಖ ಪಾರಂಪರಿಕ ಕಟ್ಟಡಗಳ ಇತಿಹಾಸ, ಅದರ ಹಿನ್ನೆಲೆ, ಪ್ರಾಮುಖ್ಯತೆ, ಹಾಗೂ ವಾಸ್ತುಶಿಲ್ಪಗಳ ಬಗ್ಗೆ ಮಾಹಿತಿ ಪಡೆದರು. ಪ್ರವಾಸೋದ್ಯಮ ಇಲಾಖೆ ವತಿಯಿಂದ ಪಾರಂಪರಿಕ ಸೈಕಲ್ ಸವಾರಿ ಆಯೋಜಿಸಲಾಗಿತ್ತು. ಬೆಳ್ಳಂಬೆಳಗ್ಗೆ 'ನಮ್ಮ ಪರಂಪರೆ ನಮ್ಮ ಹೆಮ್ಮೆ' ಎಂಬ ಟೀ ಶರ್ಟ್ ಧರಿಸಿ ಹಾಜರಿದ್ದ ನೂರಾರು ಮಂದಿ ಪುರಭವನ, ದೊಡ್ಡ ಗಡಿಯಾರ, ೧೦ನೇ ಚಾಮರಾಜೇಂದ್ರ ವೃತ್ತ, ಅರಮನೆ, ನಾಲ್ವಡಿ ಕೃಷ್ಣರಾಜ ಒಡೆಯರ್ ವೃತ್ತ ಸೇರಿದಂತೆ ನಗರದ ೨೦ ಪಾರಂಪರಿಕ ಕಟ್ಟಡಗಳತ್ತಾ ಸಾಗಿದರು. ಇತಿಹಾಸ ತಜ್ಞರಾದ ಪ್ರೋ. ಡಾ.ಶೆಲ್ವ ಪಿಳ್ಳೈ ಅಯ್ಯಂಗಾರ್ ಹಾಗೂ ನಿವೃತ್ತ ಪ್ರೊ. ರಂಗನಾಥ ಕಟ್ಟಡಗಳ ಹಿನ್ನೆಲೆ, ವಾಸ್ತುಶಿಲ್ಪ ಸೇರಿ ಇತಿಹಾಸದ ಬಗ್ಗೆ ಮಾಹಿತಿ ನೀಡಿದರು.

***************

ಶ್ರೀರಂಗಪಟ್ಟಣ ಪಾರಂಪರಿಕ ದಸರಾ ಉದ್ಘಾಟನೆಗೆ ಕ್ಷಣಗಣನೆ ಆರಂಭವಾಗಿದೆ. ಚಲನಚಿತ್ರ ನಿರ್ದೇಶಕ ಟಿ.ಎಸ್.ನಾಗಾಭರಣ ನಾಡದೇವತೆ ಚಾಮುಂಡೇಶ್ವರಿ ವಿಗ್ರಹ ಹೊತ್ತ ಅಂಬಾರಿ ಮೆರವಣಿಗೆಗೆ ಪುಷ್ಪಾರ್ಚನೆ ನೆರವೇರಿಸುವ ಮೂಲಕ ಚಾಲನೆ ನೀಡಲಿದ್ದಾರೆ. ಮೈಸೂರಿನಿಂದ ಅಂಬಾರಿ ಹೊತ್ತ ಜಂಬೂ ಸವಾರಿ ಮೆರವಣಿಗೆಗಾಗಿ ಮಹೇಂದ್ರ, ಲಕ್ಷ್ಮಿ ಹಾಗೂ ಕಾವೇರಿ ಆನೆಗಳು ಶ್ರೀರಂಗಪಟ್ಟಣಕ್ಕೆ ಆಗಮಿಸಿದ್ದು, ಅವುಗಳನ್ನು ಮಂಡ್ಯ ಜಿಲ್ಲಾಡಳಿತದ ವತಿಯಿಂದ ಸ್ವಾಗತಿಸಲಾಯಿತು. ಕಿರಂಗೂರಿನ ಬನ್ನಿಮಂಟಪದಿಂದ ಮೆರವಣಿಗೆ ಶುರುವಾಗಿ, ರಂಗನಾಥ ದೇಗುಲದ ಬಳಿ ಅಂತ್ಯವಾಗಲಿದೆ.

***************

ರಾಜ್ಯದ ವಿವಿಧೆಡೆ ಇಂದು ಸ್ವಚ್ಛತಾ ಅಭಿಯಾನ ನಡೆಯಿತು. ದಾವಣಗೆರೆಯಲ್ಲಿ ಸೇವಾ ಪಾಕ್ಷಿಕದ ಅಂಗವಾಗಿ ಜಿಲ್ಲಾಡಳಿತ ಮತ್ತು ನಗರಪಾಲಿಕೆಯಿಂದ ಕೆರೆ ಮತ್ತು ಶಾಲಾ ಆವರಣಗಳ ಸ್ವಚ್ಚತಾ ಕಾರ್ಯಕ್ರಮ ನಡೆಯಿತು. ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ, ಮಹಾನಗರ ಪಾಲಿಕೆ ಆಯುಕ್ತೆ ಶ್ರೀ ಮತಿ ರೇಣುಕಾ ಹಾಗೂ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಮತ್ತು ಸಿಬ್ಬಂದಿ ಕುಂದವಾಡ ಕೆರೆಯ ಸುತ್ತ ಮತ್ತು ಪರಿಸರವನ್ನು ಸ್ವಚ್ಛಗೊಳಿಸಿದರು. ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಮಾತನಾಡಿ ಸ್ವಚ್ಛತೆ ಎನ್ನುವ ಪರಿಕಲ್ಪನೆ ಮೊದಲು ಮನೆಯಿಂದಲೇ ಆರಂಭವಾಗಬೇಕು, ಶಾಲೆಗಳಲ್ಲೂ ಮಕ್ಕಳಿಗೆ ನಿತ್ಯ ಹೇಳಿಕೊಡಬೇಕು ಎಂದರು. ಸ್ವಚ್ಛತಾ ಹಿ

ಸೇವಾ, ಸ್ವಚ್ಛತಾ ಸೇವಾ ಪಾಕ್ಷಿಕದ ದಿನಾಚರಣೆಯ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲಾಧಿಕಾರಿ ಡಾ.ಸುರೇಶ್ ಬಿ.ಇಟ್ನಾಳ್ ನೇತೃತ್ವದಲ್ಲಿ ಪ್ರತಿಜ್ಞೆ ಸ್ವೀಕರಿಸುವ ಮೂಲಕ ಸ್ವಚ್ಛತೆಯೇ ಸೇವೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

*****ಧ್ವನಿ***

ಸೇವಾಪಾಕ್ಷಿಕದ ಅಂಗವಾಗಿ ಇಂದು ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಅವರ ಜನ್ಮದಿನದ ಪ್ರಯುಕ್ತ ಬಳ್ಳಾರಿಯಲ್ಲಿ ಸಸಿಗಳನ್ನು ನೆಡುವ ಮೂಲಕ ಆಚರಿಸಲಾಯಿತು. ಆಕಾಶವಾಣಿ ಬೆಂಗಳೂರಿನ ಆವರಣದಲ್ಲಿ ಇಂದು ಸ್ವಚ್ಛತಾ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮ ಹಾಗೂ ಇಂಜಿನಿಯರಿಂಗ್ ವಿಭಾಗದ ಹಿರಿಯ ಅಧಿಕಾರಿಗಳು ಹಾಗೂ ಸುದ್ದಿ ವಿಭಾಗದ ಮುಖ್ಯಸ್ಥರು ಸೇರಿದಂತೆ ಇತರೆ ಸಿಬ್ಬಂದಿ ಸ್ವಚ್ಛತಾ ಹಿ ಸೇವಾ ಅಭಿಯಾನದಲ್ಲಿ ಪಾಲ್ಗೊಂಡರು. ಉದ್ಯಾನವನದಲ್ಲಿ ಸಸಿ ನೆಡುವ ಮೂಲಕ ಪರಿಸರ ಕಾಳಜಿಯನ್ನು ಕೈಗೊಳ್ಳಲಾಯಿತು.

***************